ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಅ/ಯ.ವ/ತಾಂ.ಮ/ 154 /2013-14

ಅಧೀಕ್ಷಕ ಅಭಿಯಂತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 23-12-13

ತಾಂತ್ರಿಕ ಮಂಜೂರಾತಿ

ವಿಷಯ:- Construction of RCC drain from Nanjappa circle Dwaraka choultry to Saptagiri layout(KEB office) in road in ward No. 09 in Vidyaranyapura sub Division.

ಉಲ್ಲೇಖ:- 1) ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ:
2) ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ./ಜಂ.ಅ/ ಅ.ಅ/627 13-14, ದಿನಾಂಕ:

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯಾರಣ್ಯಪುರ ಉಪ ವಿಭಾಗ) ರವರು 2013-14ನೇ ಸಾಲಿನ ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್ ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ. 4.00 ಲಕ್ಷಗಳಿಗೆ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಅಪರ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:21-07-2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 40 ಕ್ರ.ಸಂ 154 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಅಧೀಕ್ಷಕ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ, ಬೆಂಗಳೂರು-92.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಕಾರ್ಯಪಾಲಕ ಅಭಿಯಂತರರು,ಬ್ಯಾಟರಾಯನಪುರ ವಿಭಾಗ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.